# ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್

ಕೆಂಪೇಗೌಡ ರಸ್ತೆ, ಬೆಂಗಳೂರು
ದಿನಾಂಕ: 24-02-2018.

## : ಸೂಚನೆ :

ದಿನಾಂಕ: 04-03-2018ರಂದು ಆಯೋಜಿಸಲಾಗುತ್ತಿರುವ ಲಿಖಿತ ಪರೀಕ್ಷೆಗೆ ಸಂಬಂಧಿಸಿದಂತೆ ಪರೀಕ್ಷಾ ವೇಳಾ ಪಟ್ಟಿ ಹಾಗೂ ಪರೀಕ್ಷಾ ವಿಧಾನದಲ್ಲಿ ಪಾಲಿಸಬೇಕಾದ ಸೂಚನೆಗಳ ಬಗ್ಗೆ .

1. ಪರೀಕ್ಷೆಯ ಅವಧಿ

| ಕ್ರ. ಸಂ | ಪರೀಕ್ಷೆಯ ಹೆಸರು | ಅವಧಿ |
|---|---|---|
| 1 | ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರು | ಬೆಳಗ್ಗೆ 11.00 ರಿಂದ ಮಧ್ಯಾಹ್ನ 12.15 ರವರೆಗೆ |
| 2 | ವಲಯ ಮೇಲ್ವಿಚಾರಕರು | ಮಧ್ಯಾಹ್ನ 2.30 ರಿಂದ 3.45 ರವರೆಗೆ |

2. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಪ್ರವೇಶಿಸುವ ಮುನ್ನ ಸೂಚನೆಗಳು

   1. ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರ ಹುದ್ದೆಗೆ ಲಿಖಿತ ಪರೀಕ್ಷೆಯನ್ನು ಬರೆಯಲಿಚ್ಛಿಸುವ ಅಭ್ಯರ್ಥಿಗಳು ಬೆಳಿಗ್ಗೆ 10.00 ಗಂಟೆಯ ಒಳಗೆ ಸಂಬಂಧಪಟ್ಟ ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರಿರತಕ್ಕದ್ದು.
   2. ವಲಯ ಮೇಲ್ವಿಚಾರಕರ ಹುದ್ದೆಗೆ ಲಿಖಿತ ಪರೀಕ್ಷೆಯನ್ನು ಬರೆಯಲಿಚ್ಛಿಸುವ ಅಭ್ಯರ್ಥಿಗಳು ಮಧ್ಯಾಹ್ನ 1.30 ಗಂಟೆಯ ಒಳಗೆ ಸಂಬಂಧಪಟ್ಟ ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರಿರತಕ್ಕದ್ದು.
   3. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಪ್ರವೇಶಪತ್ರ ಹಾಗೂ ಅವರು ಅರ್ಜಿಯೊಂದಿಗೆ ಅಪ್ ಲೋಡ್ ಮಾಡಿದ ಆಧಾರ್ ಕಾರ್ಡ್‌ನ ಪ್ರತಿಯನ್ನು ಹಾಜರುಪಡಿಸುವುದು ಕಡ್ಡಾಯವಾಗಿರುತ್ತದೆ. ಆಧಾರ್ ಕಾರ್ಡ್ ಪಡೆಯಲು ಅರ್ಜಿ ಸಲ್ಲಿಸಿ ಆಧಾರ್ ಕಾರ್ಡ್ ಸ್ವೀಕೃತಿಯಾಗದ ಅಭ್ಯರ್ಥಿಗಳು ಭಾವಚಿತ್ರ ಇರುವ ಮತ್ತೊಂದು ಗುರುತಿನ ಚೀಟಿಯನ್ನು (ಡ್ರೈವಿಂಗ್ ಲೈಸೆನ್ಸ್/ಚುನಾವಣಾ ಐ.ಡಿ(ಇ.ಪಿ.ಐ.ಸಿ) /ಪಾಸ್ ಪೋರ್ಟ್ /ಪಾನ್ ಕಾರ್ಡ್ /ಸರ್ಕಾರಿ ಸಂಸ್ಥೆಯು ನೀಡಿರುವ ಭಾವಚಿತ್ರ ಇರುವ ಐ.ಡಿ)ಕಡ್ಡಾಯವಾಗಿ ಹಾಜರುಪಡಿಸಬೇಕು. ಗುರುತಿನ ಚೀಟಿಯನ್ನು ಹಾಜರುಪಡಿಸದೇ ಇರುವಂತಹ ಅಭ್ಯರ್ಥಿಗಳಿಗೆ ಪ್ರವೇಶವನ್ನು ನಿರಾಕರಿಸಲಾಗುವುದು
   4. ಅಭ್ಯರ್ಥಿಗಳು ಮೊಬೈಲ್, ಟ್ಯಾಬ್, ಬ್ಲೂಟೂತ್, ಡಿಜಿಟಲ್ ವಾಚ್ ಮತ್ತು ಇತರೇ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೇಂದ್ರಕ್ಕೆ ತರುವುದನ್ನು ನಿಷೇಧಿಸಲಾಗಿದೆ. ಆದಾಗ್ಯೂ ಅಭ್ಯರ್ಥಿಯು ಪರೀಕ್ಷಾ ಕೊಠಡಿಯಲ್ಲಿ ಇವುಗಳನ್ನು ಇಟ್ಟುಕೊಂಡಿದ್ದಲ್ಲಿ ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು.
   5. ಸದರಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು 60 ವಸ್ತುನಿಷ್ಠ ಬಹು ಆಯ್ಕೆ (Objective Multiple Choice) ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.
   6. ಅಭ್ಯರ್ಥಿಗಳಿಗೆ ಒ.ಎಂ.ಆರ್ ಉತ್ತರ ಹಾಳೆಯನ್ನು ನೀಡಲಾಗುವುದು ಹಾಗೂ ಅಭ್ಯರ್ಥಿಗಳು ಪ್ರಶ್ನೆಗಳಿಗೆ ಕಪ್ಪು ಶ್ಯಾಯಿಯ ಬಾಲ್ ಪಾಯಿಂಟ್ ಪೆನ್ (Black Ball Point Pen) ನಿಂದ ಮಾತ್ರ ಉತ್ತರಗಳನ್ನು ಗುರುತಿಸುವುದು.

24/2/2018

ಯೋಜನಾ ನಿರ್ದೇಶಕರು
ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್